ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 10-3-2017

## <u>ಪತ್ರಿಕಾ ಆಮಂತ್ರಣ</u>

**1. Orientation Programme for the special judges under Pocso Act and Principal Magistrates under J.J. act.**

**<u>Inauguration:</u>**

**Hon. Justice Madan B. Lokur,**
**Judge, Supreme Court of India.**

**<u>Presiding over by</u>:**

**Hon. Justice Subhro Kamal Mukherjee,**
**Chief Justice, High Court of Karnataka**
**and Patron-in-Chief,**
**Karnataka State Legal Services Authority.**

**<u>Chief Guest:</u>**

**Mr. Justice Jayant Patel,**
**Judge, High Court of Karnataka and Executive Chairman, Karnataka State Legal Services Authority**

**Date: 11-03-2017, Saturday Time : 9.30 AM.**

**Place: No. 419, Conference Hall, 4th Floor,Vikasa Soudha, Bengaluru.**

**2.ರಾಷ್ಟ್ರಮಟ್ಟದ ಸಾವಯವ ಮತ್ತು ಸಿರಿಧಾನ್ಯಗಳ ವಾಣಿಜ್ಯ ಮೇಳ – 2017: ಮೇಳದ ಅನಾವರಣ ಕಾರ್ಯಕ್ರಮ**

**ಉಪಸ್ಥಿತಿ:**

**ಕೃಷ್ಣ ಬೈರೇಗೌಡ, ಕೃಷಿ ಸಚಿವರು, ಕರ್ನಾಟಕ ಸರ್ಕಾರ**

**ದಿನಾಂಕ: 11–03–2017, ಶನಿವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ**

**ಸ್ಥಳ: ಸೆನೆಟ್ ಹಾಲ್, ದಿ ಕ್ಯಾಪಿಟಲ್ ಹೋಟೆಲ್, ರಾಜಭವನ ರಸ್ತೆ, ಬೆಂಗಳೂರು.**

**3.ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪ್ರದಾನ ಸಮಾರಂಭ – 2016**

**ಪ್ರಶಸ್ತಿ ಪ್ರದಾನ:**

**ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ,**

**ಪ್ರಶಸ್ತಿ ಪುರಸ್ಕೃತರ ಪರಿಚಯ ಪುಸ್ತಕ ಬಿಡುಗಡೆ:**

**ಡಾ. ಎಚ್. ಸಿ. ಮಹದೇವಪ್ಪ, ಲೋಕೋಪಯೋಗಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವರು**

**ಅಧ್ಯಕ್ಷತೆ:**

**ಆರ್. ರೋಷನ್ ಬೇಗ್,**
**ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಸಚಿವರು**

**ದಿನಾಂಕ: 11–03–2017, ಶನಿವಾರ, ಸಮಯ: ಸಂಜೆ 5.00 ಗಂಟೆಗೆ**

**ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.**

## ಪತ್ರಿಕಾ ಪ್ರಕಟಣೆ

# ಮಾರ್ಚ್ 20 ರಿಂದ 25 ರವರೆಗೆ

# ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರವು ರಾಜ್ಯದ ರಫ್ತು ಸಾಮರ್ಥ್ಯವನ್ನು ಹೆಚ್ಚಿಸುವ ರಾಜ್ಯ ಸರ್ಕಾರದ ಸಂಸ್ಥೆಯಾಗಿದ್ದು, 6 ದಿನಗಳ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮವನ್ನು ಮಾರ್ಚ್ 20 ರಿಂದ 25 ರವರೆಗೆ ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ.

ಕೈಗಾರಿಕೋದ್ಯಮಿಗಳಿಗೆ ಮತ್ತು ಭಾವಿ ರಫ್ತುದಾರರನ್ನು ರಫ್ತು ಕ್ಷೇತ್ರಕ್ಕೆ ಪ್ರವೇಶಿಸಲು ಪ್ರೋತ್ಸಾಹಿಸುವ ಮೂಲಕ ರಾಜ್ಯದ ರಫ್ತು ಸಾಮರ್ಥ್ಯವನ್ನು ಹೆಚ್ಚಿಸುವ ದೃಷ್ಟಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮವು ರಫ್ತು ವ್ಯಾಪಾರಕ್ಕೆ ಸಂಬಂಧಪಟ್ಟಿದ್ದು

* **Introduction to Export Business & WTO,**
* **Introudction on Intellectual Property Rights (IPR),**
* **Export Import Policy (Foreign Trade Policy),**
* **Export Credit,**
* **Export Marketing Plan,**
* **Export Quality Management,**
* **Bank Financing & Regultions,**
* **Customs & Central Excise Formalities,**
* **Export Packaging,**
* **Export Costing & Pricing,**

* **Trade Fairs and Exhibitons,**

* **Procedures and Formalities,**

* **Roles of Export Promotion Councils, ECGC, Export Houses, VTPC, C & F Agents,**

* **Internet and E-commerce,**

* **Marine Insurance,**

* **Field visits to Inland Container Depot and Bengluru Air Cargo Complex**

* **Export Incentives.**

ಈ ವಿಷಯಗಳಲ್ಲಿ ಚರ್ಚಿಸುವ ಮೂಲಕ ತರಬೇತಿ ಕಾರ್ಯಕ್ರಮದಲ್ಲಿ ಚರ್ಚೆ ನಡೆಯಲಿದ್ದು ರಫ್ತು ವ್ಯಾಪಾರವನ್ನು ಪ್ರಾರಂಭಿಸಲು ಉಪಯುಕ್ತವಾಗಲಿದೆ.

ರಫ್ತು ವ್ಯಾಪಾರವನ್ನು ಪ್ರಾರಂಭಿಸಲು ಆಸಕ್ತಿಯುಳ್ಳ ಕೈಗಾರಿಕೆಗಳು/ಭಾವಿ ರಫ್ತುದಾರರು ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು ವಿ.ಟಿ.ಪಿ.ಸಿ. ಕಚೇರಿಯಲ್ಲಿ ನೊಂದಣಿಯನ್ನು ಮಾಡಿಸಬೇಕು.

ತರಬೇತಿಯು ವಿ.ಟಿ.ಪಿ.ಸಿ. ತರಬೇತಿ ಕೊಠಡಿ, ಬಿ.ಎಂ.ಟಿ.ಸಿ. ಸಂಕೀರ್ಣ, 'ಎ' ಬ್ಲಾಕ್, 3ನೇ ಮಹಡಿ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು –27 ಇಲ್ಲಿ ನಡೆಯಲಿದೆ.

ಹೆಚ್ಚಿನ ವಿವರಗಳಿಗಾಗಿ ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ, ಬಿ.ಎಂ.ಟಿ.ಸಿ, ಸಂಕೀರ್ಣ, 'ಎ' ಬ್ಲಾಕ್, 3ನೇ ಮಹಡಿ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು – 560 027 ದೂ. 080 –22534444/22210644, ಫ್ಯಾಕ್ಸ್: 22210655 ಇ–ಮೇಲ್ : vtpckarnatak@gmail.com/ವೆಬ್‌ಸೈಟ್ www.vtpckrnataka.gov.in ಅಥವಾ ಸಿ.ಎಸ್. ಭಾಸ್ಕರ್, ವಿ.ಟಿ.ಪಿ.ಸಿ. ಇವರನ್ನು ಸಂಪರ್ಕಿಸಬಹುದಾಗಿದೆ. ಮೊಬೈಲ್ ಸಂಖ್ಯೆ 9880958218

ಎಂಅರ್‌ಎಂ:ಜಿಪಿಆರ್.

# "ಸರ್ಕಾರದ ಯೋಜನೆಗಳು; ಮಾಧ್ಯಮಗಳ ಹೊಣೆಗಾರಿಕೆ" ಕುರಿತ ವಿಚಾರ ಸಂಕಿರಣ

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

ಕರ್ನಾಟಕ ಮಾಧ್ಯಮ ಅಕಾಡೆಮಿಯು, ಕನ್ನಡ ವಿಶ್ವವಿದ್ಯಾಲಯ, ಹಂಪಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬಳ್ಳಾರಿ ಇವರ ಸಹಯೋಗದಲ್ಲಿ "ಸರ್ಕಾರದ ಯೋಜನೆಗಳು, ಮಾಧ್ಯಮಗಳ ಹೊಣೆಗಾರಿಕೆ' ಕುರಿತು ವಿಚಾರ ಸಂಕಿರಣವನ್ನು ಆಯೋಜಿಸಿದೆ.

"ಸರ್ಕಾರದ ಯೋಜನೆಗಳು; ಮಾಧ್ಯಮಗಳ ಹೊಣೆಗಾರಿಕೆ ಕುರಿತ ಈ ವಿಚಾರ ಸಂಕಿರಣವನ್ನು ಬಳ್ಳಾರಿ ಜಿಲ್ಲೆಯ ಹಂಪಿಯ ಕನ್ನಡ ವಿಶ್ವವಿದ್ಯಾಲಯದಲ್ಲಿರುವ ಮಂಟಪ ಸಭಾಂಗಣದಲ್ಲಿ ಮಾರ್ಚ್ 31 ರಂದು ಹಮ್ಮಿಕೊಂಡಿದೆ.

ಕಾರ್ಮಿಕ ಸಚಿವ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್ ಅವರು ವಿಚಾರ ಸಂಕಿರಣವನ್ನು ಉದ್ಘಾಟಿಸಲಿದ್ದಾರೆ. ನಾಡಿನ ಹಲವು ತಜ್ಞರು ಗೋಷ್ಠಿಯಲ್ಲಿ ಮಾತನಾಡಲಿದ್ದಾರೆ.

ಎಂಅರ್‌ಎಂ:ಜಿಪಿಆರ್.

# ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಖಾಲಿ ಇರುವ ಕ್ಷೇತ್ರ ಸಂಪನ್ಮೂಲ ವ್ಯಕ್ತಿ (ಬಿ.ಆರ್‌ಪಿ.) ಮತ್ತು ಸಮೂಹ ಸಂಪನ್ಮೂಲ ವ್ಯಕ್ತಿ (ಸಿ.ಆರ್.ಪಿ.) ಹುದ್ದೆಗಳನ್ನು ಭರ್ತಿಮಾಡಲು ಸೇವೆಯಲ್ಲಿರುವ ಸರ್ಕಾರಿ ಪ್ರೌಢಶಾಲಾ ಪ್ರಾಥಮಿಕ ಶಾಲಾ ಶಿಕ್ಷಕರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಮಾರ್ಚ್ 16 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು (ಆಡಳಿತ), ಉಪ ನಿರ್ದೇಶಕರು (ಅಭಿವೃದ್ಧಿ) ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಸಂಪರ್ಕಿಸುವುದು ಅಥವಾ ಇಲಾಖಾ ವೆಬ್‌ಸೈಟ್

www.schooleducation.kar.nic.in / www.ssakarnartaka.gov.in ಅನ್ನು ವೀಕ್ಷಿಸಬಬಹುದಾಗಿದೆ ಎಂದು ಸರ್ವ ಶಿಕ್ಷಣ ಅಭಿಯಾನ ಸಮಿತಿ ಪ್ರಕಟಣೆ ತಿಳಿಸಿದೆ.
ಎಂಆರ್‌ಎಂ:ಜಿಪಿಆರ್.

## ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಖಾಲಿ ಇರುವ ಕ್ಷೇತ್ರ ಸಂಪನ್ಮೂಲ ಕೇಂದ್ರಗಳಲ್ಲಿನ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ (ಬಿ.ಆರ್.ಸಿ.) ಹುದ್ದೆಗಳನ್ನು ಭರ್ತಿಮಾಡಲು ಸೇವೆಯಲ್ಲಿರುವ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಮಾರ್ಚ್ 16 ಕೊನೆಯ ದಿನವಾಗಿರುತ್ತದೆ

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು (ಆಡಳಿತ), ಉಪ ನಿರ್ದೇಶಕರು (ಆಡಳಿತ) ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಸಂಪರ್ಕಿಸುವುದು ಅಥವಾ ಇಲಾಖಾ ವೆಬ್‌ಸೈಟ್ www.schooleducation.kar.nic.in / www.ssakarnartaka.gov.in ಅನ್ನು ವೀಕ್ಷಿಸಬಬಹುದಾಗಿದೆ ಎಂದು ಸರ್ವ ಶಿಕ್ಷಣ ಅಭಿಯಾನ ಸಮಿತಿ ಪ್ರಕಟಣೆ ತಿಳಿಸಿದೆ.

ಎಂಆರ್‌ಎಂ:ಜಿಪಿಆರ್.

## ಮುಂದಿನ ಒಂದು ವರ್ಷಗಳ ಕಾಲ ರಾಜ್ಯದಲ್ಲಿ ವಿದ್ಯುತ್ ಕೊರತೆ ಉಂಟಾಗದಂತೆ ಕ್ರಮ – ಸಚಿವ ಡಿ.ಕೆ. ಶಿವಕುಮಾರ್

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಮುಂದಿನ ಒಂದು ವರ್ಷಗಳ ಕಾಲ ವಿದ್ಯುತ್ ಕೊರತೆ ಉಂಟಾಗದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಇಂದು ಭೇಟಿಮಾಡಿದ ಸುದ್ಧಿಗಾರರೊಂದಿಗೆ ಮಾತನಾಡಿದ ಸಚಿವರು ಈ ಸಂಬಂಧ ಇಂದು ಇಂಧನ ಇಲಾಖೆಯ ಎಲ್ಲಾ ವಿಭಾಗಗಳ ಉನ್ನತ ಮಟ್ಟದ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ್ದು ಈಗಿನಿಂದಲ್ಲೇ ಅಧಿಕಾರಿಗಳು ಎಲ್ಲಾ ರೀತಿಯ ಜಾಗ್ರತೆವಹಿಸುವಂತೆ ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ ಎಂದರು.

ರಾಜ್ಯದಲ್ಲಿ ಭೀಕರ ಬರಗಾಲವಿದೆ. ಹೀಗಾಗಿ ಬೇಸಿಗೆಯಲ್ಲಿ ವಿದ್ಯುತ್ ಅಭಾವ ಉಂಟಾಗಬಾರದು ಎಂದ ಸಚಿವರು, ಈಗಾಗಲೇ ಕೇಂದ್ರ ಸರ್ಕಾರದಿಂದ ಹಣ ಇತರೆ ಮೂಲಗಳಿಂದ 2000 ಮೆಗಾ ವ್ಯಾಟ್ ವಿದ್ಯುತ್ ಪಡೆಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ವಿದ್ಯುತ್ ಸಮಸ್ಯೆ ಉಂಟಾಗದು ಹಾಗೂ ಲೋಡ್ ಶೆಡ್ಡಿಂಗ್ ಮಾಡುವುದಿಲ್ಲ ಎಂದ ಇಂಧನ ಸಚಿವರು, ರೈತರಿಗೆ ಬೇಸಿಗೆ ಕಾಲದಲ್ಲಿ ಸಮರ್ಪಕ ವಿದ್ಯುತ್ ಪೂರೈಸಲಾಗುವುದು. ನಮ್ಮಲ್ಲಿ ವಿದ್ಯುತ್ ಉತ್ಪಾದನೆ ಚೆನ್ನಾಗಿದೆ. ಹೆಚ್ಚುವರಿ ವಿದ್ಯುತ್ ಖರೀದಿ ಅವಶ್ಯಕತೆ ಇಲ್ಲ ಇಂದು ತಿಳಿಸಿದರು.

ನಮ್ಮಲ್ಲಿರುವ ಪವನ ಶಕ್ತಿ, ಸೌರಶಕ್ತಿ ಬಳಸಿಕೊಂಡು ವಿದ್ಯುತ್ ಉತ್ಪಾದನೆ ಮಾಡಲಾಗುವುದು ಎಂದ ಸಚಿವರು ಮುಂದಿನ ಜೂನ್, ಜುಲೈ ತಿಂಗಳಲ್ಲಿ ಮಳೆಯಾಗದೆ ಇದ್ದರೆ ಯಾವ ರೀತಿ ಪರಿಸ್ಥಿತಿ ನಿಭಾಯಿಸಬೇಕು ಅನ್ನೋ ಬಗ್ಗೆಯು ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ. ತುಂಗಭದ್ರದಲ್ಲಿ ಹೆಚ್ಚು ನೀರು ಸಂಗ್ರಹಣೆ ನಿರೀಕ್ಷಿಸಲಾಗಿತ್ತು. ಆ ಪ್ರಮಾಣದಲ್ಲಿ ನೀರಿಲ್ಲ. ಶರಾವತಿಯಲ್ಲಿ ನೀರು ಸಂಗ್ರಹ ಇದೆ. ಅವರಿಂದ ವಿದ್ಯುತ್ ಉತ್ಪಾದನೆಗೆ ಸಹಕಾರಿಯಾಗಲಿದೆ ಎಂದು ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಎಂಅರ್‌ಎಂ/ಕೆಪಿಪಿ/ಜಿಪಿಆರ್.

## ವಿಜಯಪುರ ಜಿಲ್ಲಾ ಆಸ್ಪತ್ರೆಗೆ ಕಾಯಕಲ್ಪ ಪ್ರಶಸ್ತಿ

ಬೆಂಗಳೂರು, ಮಾರ್ಚ್ 10 , (ಕರ್ನಾಟಕ ವಾರ್ತೆ)

2016–17 ನೇ ಸಾಲಿನ ಕಾಯಕಲ್ಪ ಪ್ರಶಸ್ತಿಯನ್ನು ವಿಜಯಪುರ ಜಿಲ್ಲಾ ಆಸ್ಪತ್ರೆಯು ತನ್ನಾದಾಗಿಸಿಕೊಳ್ಳುವ ಮೂಲಕ 50 ಲಕ್ಷ ರೂ. ಬಹುಮಾನವನ್ನು ಪಡೆದುಕೊಂಡಿದೆ.

ಇಂದು ವಿಕಾಸಸೌಧದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆವತಿಯಿಂದ ಏರ್ಪಡಿಸಲಾಗಿದ್ದ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸ್ವಚ್ಛಭಾರತದ ಅಭಿಯಾನದ ಅಂಗವಾಗಿ ಕಾಯಕಲ್ಪ ಕಾರ್ಯಕ್ರಮವು ಅನುಷ್ಠಾನಗೊಂಡಿದ್ದು, ಅತ್ಯುತ್ತಮ ಸ್ವಚ್ಛತೆ, ನೈರ್ಮಲ್ಯ ಹಾಗೂ ಸೋಂಕು

ನಿಯಂತ್ರಣಗಳಿಂದಾಗಿ ಚಿಕಿತ್ಸೆ ಗುಣಮಟ್ಟ ಸುಧಾರಿಸುವ ಸಾರ್ವಜನಿಕ ಆರೋಗ್ಯ ಕೇಂದ್ರಗಳಿಗೆ ಪ್ರಶಸ್ತಿಯನ್ನು ನೀಡಲಾಗುತ್ತಿದೆ.

ಎರಡನೇ ಕಾಯಕಲ್ಪ ಪ್ರಶಸ್ತಿ 20 ಲಕ್ಷ ರೂ. ಬಹುಮಾನದೊಂದಿಗೆ ಶಿವಮೊಗ್ಗ ಜಿಲ್ಲೆಯ ಮೆಗ್ಗಾನ್ ಆಸ್ಪತ್ರೆಯು ತನ್ನದಾಗಿಸಿಕೊಂಡರೆ, ಬೆಂಗಳೂರಿನ ವಾಣಿ ವಿಲಾಸ ಆಸ್ಪತ್ರೆ, ತುಮಕೂರು, ಕೋಲಾರ ಜಿಲ್ಲಾ ಆಸ್ಪತ್ರೆ ಮತ್ತು ದಕ್ಷಿಣ ಕನ್ನಡ ವೆನ್‌ಲಾಕ್ ಜಿಲ್ಲಾ ಆಸ್ಪತ್ರೆಗಳು ತಲಾ 3 ಲಕ್ಷ ರೂ. ಗಳ ಸಮಾಧಾನಕರ ಪ್ರಶಸ್ತಿಯನ್ನು ಪಡೆದುಕೊಂಡವು.

ಎಂಆರ್‌ಎಂ/ಕೆಪಿಪಿ/ಜಿಪಿಆರ್.

## ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷಾ ವರದಿ ಏಪ್ರಿಲ್‌ನಲ್ಲಿ ಬಿಡುಗಡೆ – ಹೆಚ್. ಆಂಜನೇಯ

ಬೆಂಗಳೂರು, ಮಾರ್ಚ್ 10, (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರ ಈಗಾಗಲೇ ನಡೆಸಿರುವ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷಾ ವರದಿಯನ್ನು ಏಪ್ರಿಲ್ ತಿಂಗಳಿನಲ್ಲಿ ಬಿಡುಗಡೆ ಮಾಡುವುದಾಗಿ ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ಪ್ರಕಟಿಸಿದರು.

ವಿಧಾನ ಸೌಧದ ತಮ್ಮ ಕಛೇರಿಯಲ್ಲಿ ಇಂದು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಮೂಲಕ ರಾಜ್ಯಾದ್ಯಂತ ಈಗಾಗಲೇ ಸಮೀಕ್ಷೆ ನಡೆಸಲಾಗಿದ್ದು ಜಾತಿವಾರು ಅಂಕಿ ಅಂಶಗಳು ಸೇರಿದಂತೆ ವಿವರ ಮಾಹಿತಿಗಳನ್ನೊಳಗೊಂಡ ವರದಿಯನ್ನು ಮುಂದಿನ ತಿಂಗಳು ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಖಾಸಗಿ ಶಿಕ್ಷಣ ಸಂಸ್ಥೆಗಳು ನಡೆಸುವ ವಸತಿ ಶಾಲೆಗಳು, ಹಾಸ್ಟೆಲ್‌ಗಳ ಅಡುಗೆ ಕೋಣೆ ಹಾಗೂ ಇತರ ಪ್ರಮುಖ ಸ್ಥಳಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸುವ ಸಂಬಂಧ ಕಠಿಣವಾದ ಕಾನೂನು ತರಲು ಗಂಭೀರ ಚಿಂತನೆ ನಡೆಸಲಾಗಿದೆ ಎಂದು ಮಾತನಾಡಿದ ಸಚಿವರು, ಇತ್ತೀಚೆಗೆ ತುಮಕೂರು ಜಿಲ್ಲೆ ವ್ಯಾಪ್ತಿಯಲ್ಲಿ ಖಾಸಗಿ ಶಾಲೆಯಲ್ಲಿ ನಡೆದ ಘಟನೆಗಳು ಮತ್ತೆ ರಾಜ್ಯದಲ್ಲಿ ಮರುಕಳಿಸಬಾರದು ಎಂಬ ನಿಟ್ಟಿನಲ್ಲಿ ಈ ಕಾನೂನು ತರಲು ಚಿಂತಿಸಲಾಗಿದೆ.

ಒಳಚರಂಡಿ ಹಾಗೂ ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ಅಂಬ್ಯುಲೆನ್ಸ್, ಅಗ್ನಿಶಾಮಕದಳ ಹಾಗೂ ಇನ್ನಿತರೆ ಮುಂಜಾಗೃತ ಕ್ರಮ ಕೈಗೊಂಡು ಇಂತಹ ಕೆಲಸ

ಮಾಡಬೇಕಾಗುತ್ತದೆ. ಇದು ಸರ್ಕಾರದ ಮಾರ್ಗಸೂಚಿಯೂ ಹೌದು ಎಂದು ಮಾತನಾಡಿದ ಸಮಾಜ ಕಲ್ಯಾಣ ಸಚಿವರು, ಇತ್ತೀಚೆಗೆ ಸಿ.ವಿ. ರಾಮನ್ ನಗರದಲ್ಲಿ ಮ್ಯಾನ್‌ಹೋಲ್ ಸ್ವಚ್ಛಗೊಳಿಸುವಾಗ ಮೂರು ಮಂದಿ ಪೌರಕಾರ್ಮಿಕರು ಮೃತಪಟ್ಟಿದ್ದಾರೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮ ಗೈಗೊಳ್ಳಲಾಗುವುದು. ನಗರ ಸಭೆಗಳು, ಪುರಸಭೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಇಂತಹ ಘಟನೆಗಳು ನಡೆಯದಂತೆ ಜಾಗ್ರತೆ ವಹಿಸಬೇಕು. ಇಲ್ಲದಿದ್ದರೆ ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಸಿ.ವಿ. ರಾಮನ್ ನಗರದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಮೃತ ಪೌರ ಕಾರ್ಮಿಕರು ಕುಟುಂಬಕ್ಕೆ ತಲಾ 10 ಲಕ್ಷ ರೂ. ಪರಿಹಾರ ನೀಡುವಂತೆ ಬೆಂಗಳೂರು ಜಲಮಂಡಳಿಗೆ ಸೂಚಿಸಲಾಗಿದೆ ಎಂದ ಸಚಿವರು ಮೃತ ಕುಟುಂಬದ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ಸಂದಾಯ ಮಾಡುವಂತೆಯೂ ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಎಂಆರ್‌ಎಂ/ಕೆಪಿಪಿ/ಕೆಎಂ

## ರಾಜ್ಯದಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಟೆಲಿಮೆಡಿಸಿನ್ ಸೌಲಭ್ಯ

**– ಸಚಿವ ಕೆ.ಆರ್. ರಮೇಶ್‌ಕುಮಾರ್**

ಬೆಂಗಳೂರು, ಮಾರ್ಚ್ 10, (ಕರ್ನಾಟಕ ವಾರ್ತೆ)

ರಾಜ್ಯದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮುಂದಿನ ಆರು ತಿಂಗಳ ಒಳಗಾಗಿ ಟೆಲಿಮೆಡಿಸಿನ್ ಸೌಲಭ್ಯ ಕಲ್ಪಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್‌ಕುಮಾರ್ ಅವರು ತಿಳಿಸಿದರು.

ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ ಇಂದು ಏರ್ಪಡಿಸಿದ್ದ 'ಇ-ಆರೋಗ್ಯ ಕಾರ್ಯಕ್ರಮದ ಪಿ.ಹೆಚ್.ಸಿ. ಮ್ಯಾನೇಜ್‌ಮೆಂಟ್ ಇನ್‌ಫರ್‌ಮೇಷನ್ ಸಿಸ್ಟಮ್' ಅನ್ನು ಉದ್ಘಾಟಿಸಿ ಮಾತನಾಡಿದ ಸಚಿವರು ನುರಿತ ಹಾಗೂ ಪರಿಣಿತ ಶ್ರೇಣಿಯ ವೈದ್ಯರುಗಳಿಂದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಬರುವ ರೋಗಿಗಳಿಗೆ ಸೂಕ್ತ ವೈದ್ಯಕೀಯ ಸೇವೆ ಒದಗಿಸಲು ಈ ಯೋಜನೆಯಿಂದ ಸಹಕಾರಿಯಾಗಲಿದೆ ಎಂದರು.

ರಾಜ್ಯದ ಪ್ರತಿ ತಾಲ್ಲೂಕು ಕೇಂದ್ರಗಳಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ತೀವ್ರ ನಿಗಾ ಘಟಕಗಳನ್ನು ಪ್ರಾರಂಭಿಸಲಾಗುವುದು ಎಂದು ತಿಳಿಸಿದ ಸಚಿವರು, ಪ್ರತಿ 15 ಕಿ.ಮಿ. ಗೆ ಒಂದರಂತೆ ಸಂಚಾರಿ ಆಂಬುಲೆನ್ಸ್ ಸೇವೆಯನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ. ಈ ಆಂಬುಲೆನ್ಸ್‌ಗಳಲ್ಲಿ ಕೃತಕ ಉಸಿರಾಟದ ಉಪಕರಣ, ತರಬೇತಿ ಪಡೆದ ದಾದಿಯರು ಹಾಗೂ

ಅಗತ್ಯ ಸಿಬ್ಬಂದಿಗಳಿದ್ದು ತುರ್ತು ಸಂದರ್ಭಗಳಲ್ಲಿ ರೋಗಿಯ ಹಾಗೂ ಜನರ ಜೀವ ರಕ್ಷಣೆಗೆ ಈ ಸಿಬ್ಬಂದಿ ಶ್ರಮಿಸಲಿದ್ದಾರೆ ಎಂದು ಹೇಳಿದರು.

ದುಬಾರಿ ವೆಚ್ಚದ ಖಾಸಗಿ ಆಸ್ಪತ್ರೆಗಳಿಗೆ ಎಲ್ಲಾ ರೋಗಿಗಳು ಹೋಗಿ ಚಿಕಿತ್ಸೆ ಪಡೆಯುವುದು ಕಷ್ಟ. ಆದ್ದರಿಂದ ನಮ್ಮ ಸರ್ಕಾರಿ ಆಸ್ಪತ್ರೆಗಳಲ್ಲಿಯು ಎಲ್ಲಾ ರೀತಿಯ ಕಾಯಿಲೆಗಳಿಗೆ ಉತ್ತಮ ಚಿಕಿತ್ಸೆ ದೊರಕುವಂತೆ ಮಾಡುವುದು ನಮ್ಮೆಲ್ಲರ ಜವಬ್ದಾರಿಯಾಗಿದೆ ಎಂದ ಆರೋಗ್ಯ ಸಚಿವರು, ಈ ನಿಟ್ಟಿನಲ್ಲಿ ವೈದ್ಯಕೀಯ ಸಿಬ್ಬಂದಿಗಳೊಂದಿಗೆ ಆಶಾ ಕಾರ್ಯಕರ್ತರು ತಮ್ಮ ಕರ್ತವ್ಯಗಳನ್ನು ಜಬಾಬ್ದಾರಿಯಿಂದ ನಿರ್ವಹಿಸಬೇಕು ಎಂದು ತಿಳಿಸಿದರು.

ರಾಜ್ಯದಲ್ಲಿ ಸುಮಾರು **2335** ಪ್ರಾಥಮಿಕ ಆರೋಗ್ಯ ಕೇಂದ್ರಗಳಿದ್ದು ನಮ್ಮ ಸಹಭಾಗಿತ್ವದಲ್ಲಿ ಸ್ಯಾಮ್‌ಸಾಂಗ್ ಕಂಪೆನಿಯು ಈ ಒಂದು ಸಾವಿರ ಟ್ಯಾಬ್ಲೆಟ್‌ಗಳನ್ನು ಉಚಿತವಾಗಿ ನೀಡಲು ಸರ್ಕಾರದೊಂದಿಗೆ ಒಪ್ಪಂದ ಮಾಡಿಕೊಂಡರೆ, ಇನ್ನು ಉಳಿದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೂ ಈ ಸೌಲಭ್ಯವನ್ನು ವಿಸ್ತರಿಸಬೇಕು ಎಂದು ಸಚಿವರು ಮನವಿ ಮಾಡಿದರು.

ನಗರಾಭಿವೃದ್ಧಿ ಸಚಿವ ಆರ್. ರೋಷನ್ ಬೇಗ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಡಾ. ಶಾಲಿನಿ ರಜನೀಶ್, ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕ ಡಾ. ರತನ್ ಕೇಳ್ಕರ್, ಕೋಡೆ ಕನ್ಸಲ್ಟಿಂಗ್‌ನ ಉಪಾಧ್ಯಕ್ಷ ಆರ್. ರಾಮಶೇಷನ್, ಸ್ಯಾಮಸಾಂಗ್ ಆರ್ ಎಂಡ್ ಡಿ ಸಂಸ್ಥೆಯ ಮುಖ್ಯ ತಾಂತ್ರಿಕ ಆಧಿಕಾರಿ ಡಾ. ಲೋಕನಾಥ್‌ಡೆ, ಆರೋಗ್ಯ ಇಲಾಖೆಯ ನಿರ್ದೇಶಕರುಗಳಾದ ಡಾ. ಪಿ.ಎಲ್. ನಟರಾಜ್, ಡಾ. ಪಿ. ಸರೋಜ ಸೇರಿದಂತೆ ರಾಜ್ಯಾದ್ಯಂತ ಆಗಮಿಸಿದ್ದ ವೈದ್ಯಕೀಯ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಎಂಆರ್‌ಎಂ/ಕೆಪಿಪಿ/ಕೆಎಂ

## ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಆಹ್ವಾನ

**ಬೆಂಗಳೂರು, ಮಾರ್ಚ್ 10, (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ **2016** ನೇ ಸಾಲಿನ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ನಾಮನಿರ್ದೇಶನ ಹಾಗೂ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದೆ.

ಪತ್ರಿಕೋದ್ಯಮ ಕ್ಷೇತ್ರದ ವಿವಿಧ ರಂಗಗಳಲ್ಲಿ ಅನುಪಮ ಸೇವೆ ಸಲ್ಲಿಸಿದ ಸಾಧಕರಿಗೆ ಕರ್ನಾಟಕ ರಾಜ್ಯ ಸರ್ಕಾರ ಟೀಯೆಸ್ಸಾರ್, ಮೊಹರೆ ಹಣಮಂತರಾಯ, ಪರಿಸರ ಪತ್ರಿಕೋದ್ಯಮ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತದೆ.

ಟೀಯೆಸ್ಸಾರ್ ಪ್ರಶಸ್ತಿ:

ಕನ್ನಡ ಪತ್ರಿಕೋದ್ಯಮದಲ್ಲಿ "ಛೂ ಬಾಣ" ದ ಮೂಲಕ ರಾಜಕಾರಣದ ಓರೆ ಕೋರೆಗಳಿಗೆ ಹೊಸ ರೂಪವನ್ನು ನೀಡಿದ ಹಿರಿಯ ಪತ್ರಕರ್ತ ದಿ: ಟಿ.ಎಸ್. ರಾಮಚಂದ್ರರಾವ್ ಅವರು ತಮ್ಮ ಮೊನಚು ಬರಹಗಳಿಂದಲೇ ಓದುಗರ ಹೃದಯವನ್ನು ಗೆದ್ದವರು.

ಕನ್ನಡ ಪತ್ರಿಕೋದ್ಯಮದಲ್ಲಿ ಅನುಪಮ ಸೇವೆ ಸಲ್ಲಿಸುವ ಪತ್ರಕರ್ತರಿಗೆ ಟೀಯೆಸ್ಸಾರ್ ನೆನಪಿನಲ್ಲಿ ಕರ್ನಾಟಕ ಸರ್ಕಾರ 1993 ರಿಂದ ಪ್ರತಿ ವರ್ಷ "ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ" ನೀಡುತ್ತಿದೆ.

ಕನ್ನಡ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಎರಡರಲ್ಲೂ ಕನಿಷ್ಠ 30 ವರ್ಷ ಸೇವೆ ಸಲ್ಲಿಸಿರಬೇಕು ಹಾಗೂ ಪತ್ರಿಕೋದ್ಯಮ ಕ್ಷೇತ್ರದ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರಬೇಕು.

ಈ ವಾರ್ಷಿಕ ಪ್ರಶಸ್ತಿಯನ್ನು ಕೇವಲ ಒಬ್ಬ ವ್ಯಕ್ತಿಗೆ ಮಾತ್ರ ನೀಡಲಾಗುತ್ತದೆ. ಪ್ರಶಸ್ತಿಯ ಮೊತ್ತ 1 ಲಕ್ಷ ರೂ. ಆಗಿದ್ದು, ಪ್ರಶಸ್ತಿ ಪತ್ರ, ಫಲಕ ಒಳಗೊಂಡಿರುತ್ತದೆ.

ಪತ್ರಕರ್ತರ ಸಂಘಗಳು, ಸಾರ್ವಜನಿಕರು ಹಾಗೂ ಇತರ ಮೂಲಗಳಿಂದ ಟೀಯೆಸ್ಸಾರ್ ಪ್ರಶಸ್ತಿಗೆ ನಾಮ ನಿರ್ದೇಶನ ಮಾಡಬಹುದಾಗಿದೆ.

ಮೊಹರೆ ಹಣಮಂತರಾಯ ಪ್ರಶಸ್ತಿ:

ಕನ್ನಡ ಪತ್ರಿಕಾ ರಂಗದ ಭೀಷ್ಮ ಎಂದೇ ಹೆಸರಾದ ಮೊಹರೆ ಹಣಮಂತರಾಯರ ಹೆಸರಿನಲ್ಲಿ ಕರ್ನಾಟಕ ಸರ್ಕಾರವು 2010 ರಿಂದ ನೀಡುತ್ತಾ ಬಂದಿರುವ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ 1.00 ಲಕ್ಷ ರೂ. ಜೊತೆಗೆ ಪ್ರಶಸ್ತಿ ಪತ್ರ, ಫಲಕ ಒಳಗೊಂಡಿದೆ.

ಈ ವಾರ್ಷಿಕ ಪ್ರಶಸ್ತಿಯನ್ನು ಕೇವಲ ಒಬ್ಬ ವ್ಯಕ್ತಿಗೆ ಮಾತ್ರ ನೀಡಲಾಗುತ್ತಿದ್ದು ಕನ್ನಡ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಎರಡರಲ್ಲೂ ಒಟ್ಟಿಗೆ ಕನಿಷ್ಠ 30 ವರ್ಷ ಸೇವೆ ಸಲ್ಲಿಸಿರಬೇಕು ಹಾಗೂ ಕನ್ನಡ ಪತ್ರಿಕೋದ್ಯಮ ಕ್ಷೇತ್ರ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರಬೇಕು. ಪತ್ರಕರ್ತರ ಸಂಘಗಳು, ಸಾರ್ವಜನಿಕರು ಹಾಗೂ ಇತರ ಮೂಲಗಳಿಂದ ಮೊಹರೆ ಹಣಮಂತರಾಯ ಪ್ರಶಸ್ತಿಗೆ ನಾಮ ನಿರ್ದೇಶನ ಮಾಡಬಹುದಾಗಿದೆ.

ಅಭಿವೃದ್ಧಿ ಮತ್ತು ಪರಿಸರ ಪತ್ರಿಕೋದ್ಯಮ ಪ್ರಶಸ್ತಿಗಳು:

**ರಾಜ್ಯದೆಲ್ಲೆಡೆ ಅಭಿವೃದ್ಧಿಗೆ ಉತ್ತಮ ವಾತಾವರಣ ಕಲ್ಪಿಸಲು ಅನುಕೂಲವಾಗುವಂತೆ ಉತ್ತೇಜಿಸಲು ಅಭಿವೃದ್ಧಿ ಪತ್ರಿಕೋದ್ಯಮ ಹಾಗೂ ರಾಜ್ಯದಲ್ಲಿನ ಪರಿಸರ, ಪ್ರಕೃತಿ ಹಾಗೂ ನಿಸರ್ಗದ ಸಮತೋಲನ ಕಾಯ್ದುಕೊಳ್ಳಲು ನೆರವಾಗಿರುವ ಪತ್ರಕರ್ತರಿಗಾಗಿ ಪರಿಸರ ಪತ್ರಿಕೋದ್ಯಮ ಪ್ರಶಸ್ತಿಯನ್ನು ಸ್ಥಾಪಿಸಲಾಗಿದೆ.**

**ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸುವವರು ಮುದ್ರಣ ಮಾಧ್ಯಮ ಅಥವಾ ವಿದ್ಯುನ್ಮಾನ ಮಾಧ್ಯಮ ಕ್ಷೇತ್ರಗಳಲ್ಲಿ ಕನಿಷ್ಠ 10 ವರ್ಷ ಅನುಭವ ಹೊಂದಿರುವ ಪತ್ರಕರ್ತರು ಅರ್ಹರಾಗಿರುತ್ತಾರೆ. ಪ್ರಶಸ್ತಿ ತಲಾ 50,000/- ರೂ. ಪ್ರಶಸ್ತಿ ಪತ್ರ, ಫಲಕ ಒಳಗೊಂಡಿರುತ್ತದೆ.**

**ಈ ಪ್ರಶಸ್ತಿಗಳಿಗೆ ಪತ್ರಿಕಾ ಸಂಘಟನೆಗಳು ಮತ್ತು ಸಂಘ ಸಂಸ್ಥೆಗಳು ನಾಮ ನಿರ್ದೇಶನಗಳನ್ನು ಮಾಡಬಹುದು. ಅಲ್ಲದೆ ಅಭ್ಯರ್ಥಿಗಳೇ ನೇರವಾಗಿ ಅರ್ಜಿಸಲ್ಲಿಸಲು ಅವಕಾಶವಿದೆ. ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾಸೌಧ, ನಂ. 17, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು – 560 001 ಇಲ್ಲಿಗೆ ಮಾರ್ಚ್ 25 ರೊಳಗಾಗಿ ಕಳುಹಿಸಿಕೊಡಬಹುದಾಗಿದೆ.**

## Photo caption:

For Tax Exemption !

Karnataka Minister for Higher Education Mr Basavarajaraya reddy called on the Union Minister for Finance, Mr Arun Jaitley In New Delhi on March-10 and appealed for the tax exemption for VTU. Minister for Large Industries Mr R V Deshpande the Member of Parliament Mr Shivakumar Udasi Vice Chancellor VTU Mr Karisiddappa, and Principal Secretary Department of Higher Education Mr Jawaid Akhtar were present.

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಮಾರ್ಚ್ 10, (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ:12-03-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು,

ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ನರೇಂದ್ರ ಕುಮಾರ್ ಮತ್ತು ತಂಡ, ಬೆಂಗಳೂರು ಜಿಲ್ಲೆ ರವರಿಂದ ರಂಗಗೀತೆ, ಭಕ್ತಿ ಗೀತೆ ಹಾಗೂ ಜನಪದ ಗೀತೆಗಳ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀಮತಿ. ಮಂಜುಳ ಮತ್ತು ತಂಡ, ರಾಮನಗರ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಹೇಮಾ ಸಂಜಯ್ ಮತ್ತು ತಂಡದವರಿಂದ ಭರತ ನಾಟ್ಯ ಮತ್ತು ಸಮೂಹ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ , ಮಾಚೋಹಳ್ಳಿ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ..
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರು ರವರ ಸಹಯೋಗದೊಂದಿಗೆ ಶ್ರೀಮತಿ. ಮೌಶಿನಿ ಮೈತ್ರ ರವರಿಂದ **ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್ ರವರ ಸಹಯೋಗದೊಂದಿಗೆ** ಶ್ರೀ.ಜಗದೀಶ್, ಸಂಶೋಧನ ವಿದ್ಯಾರ್ಥಿ **ರವರಿಂದ ಭಾಷೆ ಮತ್ತು ಸಾಹಿತ್ಯದ ಕುರಿತಂತೆ ಉಪನ್ಯಾಸ ಕಾರ್ಯಕ್ರಮ ಹಾಗೂ ಕೃಷ್ಣ ಕುಮಾರ್ ಮತ್ತು ರಂಗ ಮಡಿಲು ಕಲಾ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

**II.ಸ್ಥಳ: ನಗರ ಕೇಂದ್ರ ಗ್ರಂಥಾಲಯದ ಮುಂಭಾಗದ ಪ್ರದೇಶ:**

- ಬೆಳಿಗ್ಗೆ 11.00 ಗಂಟೆಯಿಂದ ಬೆಳಿಗ್ಗೆ 11.30 ಗಂಟೆಯ ವರೆಗೆ ರೇವಾ ಯುನಿವರ್ಸಿಟಿ ,ಬೆಂಗಳೂರು ರವರ ವತಿಯಿಂದ ಸಾರ್ವಜನಿಕರಿಗೆ ಮಹಿಳಾ ಸಬಲೀಕರಣದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಬೀದಿ ನಾಟಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

# ಡಾ: ರಾಜ್‌ಕುಮಾರ್, ಪುಟ್ಟಣ್ಣ ಕಣಗಾಲ್ ಮತ್ತು ಡಾ: ವಿಷ್ಣುವರ್ಧನ್ ಪ್ರಶಸ್ತಿಗೆ ನಾಮನಿರ್ದೇಶನ ಆಹ್ವಾನ

**ಬೆಂಗಳೂರು, ಮಾರ್ಚ್ 10, (ಕರ್ನಾಟಕ ವಾರ್ತೆ)**

ಕನ್ನಡ ಚಿತ್ರರಂಗದ ಸಮಗ್ರ ಬೆಳವಣಿಗೆಗೆ ಅಪೂರ್ವ ಕೊಡುಗೆ ನೀಡಿದ ಸಾಧಕರಿಗೆ "ಡಾ: ರಾಜ್‌ಕುಮಾರ್ ಪ್ರಶಸ್ತಿ" ಯನ್ನು ರಾಜ್ಯದ ಚಲನಚಿತ್ರ ರಂಗದ ನಿರ್ದೇಶನ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಮಾಡಿದ ನಿರ್ದೇಶಕರನ್ನು ಗುರುತಿಸಿ "ಪುಟ್ಟಣ್ಣ ಕಣಗಾಲ್ ಪ್ರಶಸ್ತಿ" ಮತ್ತು ಕನ್ನಡ ಚಲನಚಿತ್ರದ ವಿವಿಧ ವಲಯಗಳಲ್ಲಿ ಅಪೂರ್ವ ಸಾಧನೆ ಮಾಡಿದ ಹಿರಿಯ ಚೇತನಗಳಿಗೆ "ಡಾ: ವಿಷ್ಣುವರ್ಧನ್ ಪ್ರಶಸ್ತಿ" ನೀಡಲಾಗುತ್ತದೆ. 2016 ನೇ ಕ್ಯಾಲೆಂಡರ್ ವರ್ಷದ ಕನ್ನಡ ಚಲನಚಿತ್ರ ವಾರ್ಷಿಕ ಪ್ರಶಸ್ತಿಗಳಿಗೆ ಆಯ್ಕೆ ಮಾಡಲು ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ನಾಮ ನಿರ್ದೇಶನ ಮಾಡುವವರ ಹೆಸರು, ಸಾಧನೆ/ಕೊಡುಗೆಗಳುಳ್ಳ ಸಂಪೂರ್ಣ ಮಾಹಿತಿಯನ್ನು ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು ಇವರಿಗೆ ದಿನಾಂಕ 25-3-2017 ರ ಸಂಜೆ 5.00 ಗಂಟೆಯೊಳಗೆ ಸಲ್ಲಿಸಬಹುದು.